ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಕಳೆದ 2 ವರ್ಷದಿಂದ ನೋಂದಾಯಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು?

ಆ) ನೋಂದಾಯಿಸಿದ ಅಭ್ಯರ್ಥಿಗಳಲ್ಲಿ ಎಷ್ಟು ಜನರಿಗೆ ನೌಕರಿ ಸಿಕ್ಕಿದೆ?

ಇ) ಉದ್ಯೋಗ ವಿನಿಮಯ ಕಚೇರಿಯಲ್ಲಿ ಯಾವ ರೀತಿ ಕೆಲಸಕ್ಕೆ ಸಂದರ್ಶನ ಕಳಿಸಿಕೊಡುವ ವ್ಯವಸ್ಥೆ ಇದೆ?

ಈ) ಕಚೇರಿಯಲ್ಲಿ ಕಂಪ್ಯೂಟರ್ ಅಳವಡಿಸಲಾಗಿದೆಯೇ?

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಹಾಗೂ ವಕ್ಫ್ ಸಚಿವರು):

ಅ) ಕಳೆದ 2 ವರ್ಷಗಳಲ್ಲಿ ಒಟ್ಟು 31,444 ಅಭ್ಯರ್ಥಿಗಳು ತುಮಕೂರು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಉದ್ಯೋಗ ನೆರವಿಗಾಗಿ ತಮ್ಮ ಹೆಸರನ್ನು ನೋಂದಾಯಿಸಿರುತ್ತಾರೆ.

ಆ) ಕಳೆದ ಎರಡು ವರ್ಷಗಳಲ್ಲಿ ಸದರಿ ಕೇಂದ್ರದಿಂದ ಒಟ್ಟು 2,149 ಅಭ್ಯರ್ಥಿಗಳಿಗೆ ಉದ್ಯೋಗ ಲಭಿಸಿದೆ.

ಇ) ಉದ್ಯೋಗ ವಿನಿಮಯ ಕೇಂದ್ರದಲ್ಲಿ ಅಭ್ಯರ್ಥಿಗಳ ನೋಂದಣಿ ಪುರಸ್ಕರಣೆ, ಉದ್ಯೋಗ ನೆರವು- ಇತ್ಯಾದಿ ಕಾರ್ಯಗಳನ್ನು ರಾಷ್ಟ್ರೀಯ ಉದ್ಯೋಗ ಸೇವಾ ಕೈಪಿಡಿಯಲ್ಲಿ ನೀಡಲಾಗಿರುವ ಮಾರ್ಗಸೂಚಿಗಳ ಆಧಾರ ನಿರ್ವಹಿಸಿಕೊಂಡು ಬರಲಾಗುತ್ತಿದ್ದು, ಅದರಂತೆ ನಿಯೋಜಕರಿಂದ ಅಧಿಸೂಚಿತವಾದ ಹುದ್ದೆಗೆ ಆಯಾ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ, ವೃತ್ತಿ ಅನುಭವ- ಈ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಅರ್ಹ ಅಭ್ಯರ್ಥಿಗಳನ್ನು ನೋಂದಣಿ ಜೇಷ್ಠತೆ ಆಧಾರ ಆಯ್ಕೆ ಮಾಡಿ ನಿಗದಿತ ಅನುಪಾತದಲ್ಲಿ ಪುರಸ್ಕರಣೆ ಮಾಡಲಾಗುತ್ತದೆ. ಈ ಕಾರ್ಯ ವಿಧಾನವನ್ನು ರಾಜ್ಯದ ಎಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳು ಪಾಲನೆ ಮಾಡಿಕೊಂಡು ಬರುತ್ತಿದೆ.

ಈ) ಇಲ್ಲ.

ತುರುವೇಕೆರೆ ತಾಲ್ಲೂಕು ವಡವನಗಟ್ಟ ಹಾಗೂ ಕಣತೂರು ಗ್ರಾಮಗಳಿಗೆ

ಪಶುಚಿಕಿತ್ಸಾಲಯ ಪ್ರಾರಂಭ ಮಾಡುವುದು.

2919(3733)

ಶ್ರೀ ಲಕ್ಷ್ಮೀನಾರಾಯಣ ಎಂ. ಡಿ.(ತುರುವೇಕೆರೆ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ವಡವನಗಟ್ಟಿ ಹಾಗೂ ಕಣತೂರು ಗ್ರಾಮಗಳಿಗೆ ಪಶು ಚಿಕಿತ್ಸಾಲಯ ಮಂಜೂರಾಗಿದೆಯೆ?

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು?

ಇ) ಕಟ್ಟಡ ಹಾಗೂ ಇತರೆ ವ್ಯವಸ್ಥೆಯನ್ನು ಏರ್ಪಾಡು ಮಾಡಲಾಗಿದೆಯೆ?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತುರುವೇಕೆರೆ ತಾಲ್ಲೂಕಿನಲ್ಲಿರುವ ಅರಣ್ಯ ಪ್ರದೇಶ.

2920(3734)

ಶ್ರೀ ಲಕ್ಷ್ಮೀನಾರಾಯಣ ಎಂ. ಡಿ.(ಅಣ್ಣಯ್ಯ)(ತುರುವೇಕೆರೆ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನಲ್ಲಿ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು?

ಆ) ಅರಣ್ಯ ಪ್ರದೇಶವನ್ನು ಅಕ್ರಮ ಸಾಗುವಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಅಂಥವರ ವಿರುದ್ಧ ಸರ್ಕಾರ ಕ್ರಮ ಜರುಗಿಸಲಾಗಿದೆಯೇ?